ಕ್ರ - 162
ನಿ - 72
146ನೇ(ಅಧಿ)ವೇಶನ
ಕಂಪ್ಯೂಟರ್

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಶೀಲ್ ಜಿ ನಮೋಶಿ ರವರ ನಿಯಮ 72 ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಪ್ರಶ್ನೆ**

ಇತ್ತೀಚೆಗೆ 2018ರಲ್ಲಿ ಕರ್ನಾಟಕ ಲೋಕಸೇವಾ ಆಯೋಗದಿಂದ ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿನ ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿನ ಸಹ ಶಿಕ್ಷಕರ ಹುದ್ದೆಗಳಿಗೆ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ಇಲ್ಲಿಯವರೆಗೂ ಆದೇಶ ಪ್ರತಿಯನ್ನು ನೀಡಿರುವುದಿಲ್ಲ. ಇದೇ ಅಧಿಸೂಚನೆಯಡಿಯಲ್ಲಿ ಆಯ್ಕೆಯಾಗಿರುವ ಮುಖ್ಯೋಪಾಧ್ಯಾಯರಿಗೆ ನೇಮಕಾತಿ ಆದೇಶವನ್ನು ಆಗಸ್ಟ್-2021ರಲ್ಲಿ ನೀಡಿರುತ್ತಾರೆ. ಆದರೆ ಸಹ ಶಿಕ್ಷಕರ ನೇಮಕಾತಿ ಆದೇಶವನ್ನು ನೀಡುವಲ್ಲಿ ಅತೀ ವಿಳಂಬ ಮಾಡಲಾಗುತ್ತಿದೆ. ಆದ್ದರಿಂದ ಈ ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿ ಸಹ ಶಿಕ್ಷಕರ ಹುದ್ದೆಗೆ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ಈ ಕೂಡಲೇ ನೇಮಕಾತಿ ಆದೇಶ ಪ್ರತಿಯನ್ನು ನೀಡಲು ಸಂಬಂಧಪಟ್ಟ ನಿರ್ದೇಶನಾಲಯದ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವ ಬಗ್ಗೆ ಈ ಮೂಲಕ ಮಾನ್ಯ ಮುಖ್ಯಮತ್ರಿಗಳ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ**

ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿನ ಮುಖ್ಯೋಪಾಧ್ಯಾಯರು ಮತ್ತು ವಿವಿಧ ವಿಷಯಗಳ ಶಿಕ್ಷಕರ ನೇಮಕಾತಿಗಾಗಿ ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಸಂಖ್ಯೆ: ಇ (1)259/2018-19/PSC, ದಿನಾಂಕ:19.11.2018 (ಉಳಿಕೆ ಮೂಲ ವೃಂದ) ಮತ್ತು ಸಂಖ್ಯೆ: ಇ (1)265/2018-19/PSC, ದಿನಾಂಕ:22.11.2018 (ಹೈದ್ರಬಾದ್ ಕರ್ನಾಟಕ)ಗಳಲ್ಲಿ ನೇಮಕಾತಿ ಅಧಿಸೂಚನೆಯನ್ನು ಹೊರಡಿಸಲಾಗಿತ್ತು.

ಅದರನ್ವಯ ಕರ್ನಾಟಕ ಲೋಕಸೇವಾ ಆಯೋಗವು ಮುಖ್ಯೋಪಾಧ್ಯಾಯರ ಹುದ್ದೆಗಳ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಿ ಅಭ್ಯರ್ಥಿಗಳ ಅರ್ಜಿಗಳನ್ನು ದಿನಾಂಕ:09.03.2021 ರಂದು ನಿರ್ದೇಶನಾಲಯಕ್ಕೆ ರವಾನಿಸಿರುತ್ತಾರೆ. ಸದರಿ ಅಭ್ಯರ್ಥಿಗಳಿಗೆ ಮೂಲ ದಾಖಲೆಗಳ ಪರಿಶೀಲನೆಯನ್ನು ನಡೆಸಿ ಸರ್ಕಾರದ ಪತ್ರ ಸಂಖ್ಯೆ: ಎಂಡಬ್ಲ್ಯೂಡಿ299ಎಂಡಿಎಸ್ 2021, ದಿನಾಂಕ:02.08.2021ರ ಮೇರೆಗೆ ಅರ್ಹ ಅಭ್ಯರ್ಥಿಗಳಿಗೆ ಆಗಸ್ಟ್-2021ರಲ್ಲಿ ನೇಮಕಾತಿ ಆದೇಶ ನೀಡಲಾಗಿರುತ್ತದೆ.

ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿನ ವಿವಿಧ ವಿಷಯಗಳ ಶಿಕ್ಷಕರ ನೇಮಕಾತಿಗೆ ಸಂಬಂಧಿಸಿದಂತೆ ಕರ್ನಾಟಕ ಲೋಕಸೇವಾ ಆಯೋಗವು ಅಂತಿಮ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಅರ್ಜಿಯನ್ನು ಈ ಕೆಳಕಂಡ ದಿನಾಂಕಗಳಂದು ನಿರ್ದೇಶನಾಲಯಕ್ಕೆ ರವಾನಿಸಿರುತ್ತಾರೆ.

| ಕ್ರ.ಸಂ | ಹುದ್ದೆಗಳ ವಿವರ | ಅಂತಿಮ ಆಯ್ಕೆ ಪಟ್ಟಿ ಸ್ವೀಕೃತವಾದ ದಿನಾಂಕ |
|---|---|---|
| 1 | ಗಣಿತ ಶಿಕ್ಷಕರು | 18.08.2021 |
| 2 | ಕನ್ನಡ ಶಿಕ್ಷಕರು | 13.09.2021 |
| 3 | ಆಂಗ್ಲ ಶಿಕ್ಷಕರು | 13.09.2021 |
| 4 | ಸಾಮಾನ್ಯ ವಿಜ್ಞಾನ ಶಿಕ್ಷಕರು | 13.09.2021 |
| 5 | ಸಮಾಜ ವಿಜ್ಞಾನ ಶಿಕ್ಷಕರು | 13.09.2021 |
| 6 | ಉರ್ದು ಶಿಕ್ಷಕರು | 07.12.2021 ಮತ್ತು 03.01.2022 |

ವಿವಿಧ ವಿಷಯಗಳ ಶಿಕ್ಷಕರ ಹುದ್ದೆಗೆ ಅಂತಿಮ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಮೂಲ ದಾಖಲೆಗಳ ಪರಿಶೀಲನೆಯನ್ನು ನಡೆಸಲಾಗಿದ್ದು, ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 02 ಬಿಇಎಂ 2021, ದಿನಾಂಕ:24.11.2021ರಲ್ಲಿನ ಕ್ರಮ ಸಂಖ್ಯೆ 4ರ ಸೂಚನೆಯಂತೆ ಸರ್ಕಾರದ ಪತ್ರ ಸಂಖ್ಯೆ: ಎಂಡಬ್ಲ್ಯೂಡಿ 29 ಎಂಡಿಎಸ್ 2022, ದಿನಾಂಕ:07.03.2022ರಲ್ಲಿ ಅರ್ಹ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶವನ್ನು ನೀಡಲು ಆರ್ಥಿಕ ಇಲಾಖೆಯ ಅನುಮತಿಯನ್ನು ಪಡೆಯಲಾಗಿರುತ್ತದೆ. ಅದರನ್ವಯ ದಿನಾಂಕ:10.03.2022 ರಿಂದ ವಿವಿಧ ಹುದ್ದೆಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಿ ಅರ್ಹ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶವನ್ನು ನೀಡಲಾಗುತ್ತಿದೆ.

**ಸಂಖ್ಯೆ: MWD 164 LMQ 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ